# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 143 (201) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಕೇಶವ ಪ್ರಸಾದ್ .ಎಸ್<br>(ವಿಧಾನಸಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ<br>ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 10.12.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ೧ | ರಾಜ್ಯಕ್ಕೆ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; 2023 ರಿಂದ ರಾಜ್ಯಕ್ಕೆ ಬಂದಿರುವ ಹೊಸ ಕೈಗಾರಿಕೆಗಳೆಷ್ಟು; ಅದರಿಂದ ಸೃಷ್ಟಿಯಾಗಲಿರುವ ಉದ್ಯೋಗಗಳೆಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ಹಾಗೂ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ/ಒಪ್ಪಿಗೆಗಳನ್ನು ಸ್ವಯಂ ಘೋಷಣಾ ಪತ್ರದ ಆಧಾರದ ಮೇಲೆ ಪಡೆಯಲು ಮತ್ತು 3 ವರ್ಷಗಳವರೆಗೆ ಸಮಯವನ್ನು ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ಕ್ಕೆ ತಿದ್ದುಪಡಿ ತರಲಾಗಿದೆ.<br>• ಕೈಗಾರಿಕೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕಾರ್ಮಿಕ ಕಾನೂನನ್ನು ಸರಳೀಕರಣಗೊಳಿಸಲಾಗಿದೆ.<br>• ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸರಣಿ ಸಭೆಗಳನ್ನು ನಡೆಸಲಾಗುತ್ತಿದೆ.<br>• ಕೈಗಾರಿಕೆಗಳನ್ನು ಶೀಘ್ರವಾಗಿ ಅಡತಡೆಗಳಿಲ್ಲದೆ, ಪ್ರಾರಂಭಿಸಲು ಈಸ್ ಆಫ್ ಡೂಯಿಂಗ್ ಬಿಸಿನೆಸ್ ಜಾರಿಗೊಳಿಸಲಾಗಿದೆ.<br>• ರಾಜ್ಯಕ್ಕೆ ವಿದೇಶಿ ಹೂಡಿಕೆಗಳನ್ನು ಆಕರ್ಷಿಸಲು ಬೆಂಗಳೂರಿನಲ್ಲಿ ದಿನಾಂಕ 12 ರಿಂದ 14ನೇ ಫೆಬ್ರವರಿ 2025ರವರೆಗೆ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ (ಇನ್ವೆಸ್ಟ್ ಕರ್ನಾಟಕ-2025)ನ್ನು ಆಯೋಜಿಸಲಾಗಿದೆ ಹಾಗೂ ದಿನಾಂಕ 10 ರಿಂದ 14ನೇ ಫೆಬ್ರವರಿ 2025ರವರೆಗೆ ಬೆಂಗಳೂರಿನಲ್ಲಿರುವ ಯಲಹಂಕ ವಾಯು ನೆಲೆಯಲ್ಲಿ ಆಯೋಜಿಸಿರುವ ಏರೋ ಇಂಡಿಯಾ-2025ರಲ್ಲಿಯೂ ಸಹ ಭಾಗವಹಿಸಲಾಗುತ್ತಿದೆ.<br><br>ಮುಂದುವರೆದು, ರಾಜ್ಯದಲ್ಲಿ ಕಳೆದ 2 ವರ್ಷಗಳಿಂದ (2022-23 ರಿಂದ) 2024ನೇ ಸಾಲಿನ ನವೆಂಬರ್ ಅಂತ್ಯದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 1,406 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಿಂದ ರೂ.4,22,814 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, ಒಟ್ಟು 5,51,506 ಜನರಿಗೆ ಉದ್ಯೋಗ ಸೃಜನೆಯಾಗಲಿದೆ. |

| | | |
|---|---|---|
| | | ಈ ಪೈಕಿ 59 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ಒಟ್ಟು ರೂ.61,452.76 ಕೋಟಿ ಬಂಡವಾಳ ಹೂಡಿಕೆಯಾಗಿದ್ದು, 90,721 ಜನರಿಗೆ ಉದ್ಯೋಗ ಸೃಜನೆಯಾಗಿದೆ. ಉಳಿದ ಯೋಜನೆಗಳು ವಿವಿಧ ಅನುಷ್ಠಾನದ ಹಂತದಲ್ಲಿರುತ್ತವೆ. |
| ಆ | ವಿಜಯಪುರ ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಸ್ಥಾಪಿಸಲು ಉದ್ದೇಶಿಸಿರುವ ಕೈಗಾರಿಕೆಗಳಾವುವು; (ಮಾಹಿತಿ ನೀಡುವುದು) | ವಿಜಯಪುರ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಿಂದ ಪ್ರಸ್ತುತದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 63 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಿಂದ ರೂ.6,659.03 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, ಒಟ್ಟು 12,345 ಜನರಿಗೆ ಉದ್ಯೋಗ ಸೃಜನೆಯಾಗಲಿದೆ. ಈ ಪೈಕಿ 2 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ಒಟ್ಟು ರೂ.49.77 ಕೋಟಿ ಬಂಡವಾಳ ಹೂಡಿಕೆಯಾಗಿದ್ದು, 15 ಜನರಿಗೆ ಉದ್ಯೋಗ ಸೃಜನೆಯಾಗಿದೆ. ಉಳಿದ ಯೋಜನೆಗಳು ವಿವಿಧ ಅನುಷ್ಠಾನ ಹಂತದಲ್ಲಿರುತ್ತವೆ. |
| ಇ | ಈ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪಿಸುವ ಕೈಗಾರಿಕೋದ್ಯಮಿಗಳಿಗೆ ಸರ್ಕಾರ ನೀಡುವ ಪ್ರೋತ್ಸಾಹಗಳೇನು; | ಕೈಗಾರಿಕಾ ನೀತಿ 2020-25 ರಲ್ಲಿ ವಿಜಯಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ವಲಯ-1 ರಲ್ಲಿ ವರ್ಗೀಕರಿಸಿದ್ದು, ಇತರೆ ವಲಯಗಳಿಗಿಂತ ಹೆಚ್ಚಿನ ಉತ್ತೇಜನ ಮತ್ತು ಪ್ರೋತ್ಸಾಹಗಳನ್ನು ಪಡೆಯಲು ಅವಕಾಶ ಕಲ್ಪಿಸಿದೆ. |
| ಈ | ತೋಟಗಾರಿಕೆ ಬೆಳೆಗಳಿಗೆ ಹೆಸರುವಾಸಿಯಾದ ವಿಜಯಪುರ ಜಿಲ್ಲೆಗೆ ಉದ್ದಿಮೆಗಳನ್ನು ತರುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? | ಮುಂದುವರೆದು ಕಳೆದ 5 ವರ್ಷಗಳಲ್ಲಿ ಜಿಲ್ಲೆಯಲ್ಲಿ 19 ಆಹಾರ ಸಂಸ್ಕರಣಾ ಘಟಕಗಳಿಗೆ ಅನುಮೋದನೆ ನೀಡಲಾಗಿದೆ |

ಸಿಐ 363 ಎಸ್‌ಪಿಐ 2024

(ಎಂ.ಬಿ.ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು